**All India Radio: Bangalore**
**National Bulletin In Kannada**
**14.09.2026 1.10 pm**

ರಾಷ್ಟ್ರೀಯ ವಾರ್ತೆಗಳು
**14.09.2026 1.10 pm**
**<>><><*><><<>**

ಮುಖ್ಯಾಂಶಗಳು

**೧. ಮುಂಬೈನಲ್ಲಿ ೬ನೇ ಅಖಿಲ ಭಾರತ ಅಧಿಕೃತ ಭಾಷಾ ಸಮ್ಮೇಳನಕ್ಕೆ ಚಾಲನೆ : ಕೇಂದ್ರ ಗೃಹ ಸಚಿವ ಅಮಿತ್ ಶಾ ಭಾಗಿ**

**೨. ಬ್ರಿಕ್ಸ್ ಶೃಂಗಸಭೆಯಲ್ಲಿ ನವದೆಹಲಿ ಘೋಷಣೆಗೆ ದೊರೆತ ಸರ್ವಸಮ್ಮತಿ ಭಾರತದ ಬೆಳೆಯುತ್ತಿರುವ ಜಾಗತಿಕ ಪ್ರಭಾವಕ್ಕೆ ಸಾಕ್ಷಿ - ರಕ್ಷಣಾ ಸಚಿವ ರಾಜನಾಥ್ ಸಿಂಗ್**

**೩. ಜಾಗತಿಕ ಆರೋಗ್ಯ ವ್ಯವಸ್ಥೆ ಬಲಪಡಿಸಲು ಬ್ರಿಕ್ಸ್ ನಾಯಕರಿಗೆ ವಿಶ್ವ ಆರೋಗ್ಯ ಸಂಸ್ಥೆ ಕರೆ**

**೪. ಏಷ್ಯಾಕಪ್ ಕ್ರಿಕೆಟ್ ಪ್ರಶಸ್ತಿ ವಿಜೇತ ಮಹಿಳಾ ತಂಡಕ್ಕೆ ಅಭಿನಂದನೆಗಳ ಮಹಾಪೂರ : ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರಿಂದ ಶುಭಾಶಯ**

**೫. ಯುಎಸ್ ಓಪನ್ ಟೆನಿಸ್ : ಜರ್ಮನಿಯ ಅಲೆಗ್ಸಾಂಡರ್ ಜ್ವೆರೇವ್‌ಗೆ ಪುರುಷರ ಸಿಂಗಲ್ಸ್ ಕಿರೀಟ**

**<>><><*><><<>**

ಭಾರತೀಯ ಸಂವಿಧಾನ ರಚನಾ ಸಭೆ ದೇವನಾಗರಿ ಲಿಪಿಯಲ್ಲಿರುವ ಹಿಂದಿಯನ್ನು ದೇಶದ ಅಧಿಕೃತ ಭಾಷೆಯಾಗಿ ಅಂಗೀಕರಿಸಿದ ಐತಿಹಾಸಿಕ ದಿನದ ಸ್ಮರಣಾರ್ಥ ಇಂದು ದೇಶಾದ್ಯಂತ ಹಿಂದಿ ದಿವಸ್ ಅನ್ನು ಆಚರಿಸಲಾಗುತ್ತಿದೆ. ೧೯೪೯ರ ಸೆಪ್ಟೆಂಬರ್ ೧೪ ರಂದು ಈ ನಿರ್ಧಾರ ಕೈಗೊಳ್ಳಲಾಗಿದ್ದು, ಪ್ರಸ್ತುತ ವಿಶ್ವದಲ್ಲೇ ಅತ್ಯಂತ ವ್ಯಾಪಕವಾಗಿ ಮಾತನಾಡಲ್ಪಡುವ ಭಾಷೆಗಳಲ್ಲಿ ಒಂದಾಗಿರುವ ಹಿಂದಿ ೫೨ ಕೋಟಿಗೂ ಹೆಚ್ಚು ಜನರ ಮಾತೃ ಭಾಷೆಯಾಗಿದೆ. ಮುಂಬೈನಲ್ಲಿ ಇಂದು ನಡೆಯುತ್ತಿರುವ ಹಿಂದಿ ದಿವಸ್-೨೦೨೬ ಹಾಗೂ ೬ನೇ ಅಖಿಲ ಭಾರತ ಅಧಿಕೃತ ಭಾಷಾ ಸಮ್ಮೇಳನದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಪಾಲ್ಗೊಂಡಿದ್ದಾರೆ. ಈ ವೇಳೆ ಸಚಿವರು ೨೦೨೫-೨೬ನೇ ಸಾಲಿನ ರಾಜ ಭಾಷಾ ಗೌರವ್ ಮತ್ತು ರಾಜಭಾಷಾ ಕೀರ್ತಿ ಪ್ರಶಸ್ತಿಗಳನ್ನು ಸಾಧಕ ಸಂಸ್ಥೆ ಹಾಗೂ ವ್ಯಕ್ತಿಗಳಿಗೆ ಪ್ರದಾನ ಮಾಡಲಿದ್ದಾರೆ. ಎರಡು ದಿನಗಳ ಈ ಸಮ್ಮೇಳನದಲ್ಲಿ ವಿದ್ವಾಂಸರು, ಸಾಹಿತಿಗಳು, ಶಿಕ್ಷಣ ತಜ್ಞರು, ಸಂಸದರು, ಹಿರಿಯ ಸರ್ಕಾರಿ ಅಧಿಕಾರಿಗಳು ಮತ್ತಿತರರು ಪಾಲ್ಗೊಂಡಿದ್ದಾರೆ. ಹಿಂದಿ ಭಾಷೆಯ ಅಭಿವೃದ್ಧಿ ಮತ್ತು ಇತರ ಭಾರತೀಯ ಭಾಷೆಗಳೊಂದಿಗೆ ಅದರ ಸೌಹಾರ್ದಯುತ ಸಮನ್ವಯತೆ ಕುರಿತು ಸಮಾವೇಶದಲ್ಲಿ ಚರ್ಚೆಗಳು ನಡೆಯಲಿವೆ.

**<>><><*><><<>**

ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರಗಳು ಆಡಳಿತ ನಡೆಸುತ್ತಿರುವ ದೇಶದ ೨೧ ರಾಜ್ಯಗಳಲ್ಲಿ ೨೦೨೯ರ ವೇಳೆಗೆ ಏಕರೂಪ ನಾಗರಿಕ ಸಂಹಿತೆ-ಯುಸಿಸಿ ಯನ್ನು ಜಾರಿಗೆ ತರಲಾಗುವುದು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಘೋಷಿಸಿದ್ದಾರೆ. ಮುಂಬೈನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ಈಗಾಗಲೇ ದೇಶದ ಕೆಲವು ರಾಜ್ಯಗಳಲ್ಲಿ ಯುಸಿಸಿ ಯಶಸ್ವಿಯಾಗಿ ಜಾರಿಗೆ ತರಲಾಗಿದ್ದು, ೨೦೨೯ರ ಅವಧಿಯೊಳಗೆ ಎನ್‌ಡಿಎ ಆಡಳಿತದ ಎಲ್ಲಾ ೨೧ ರಾಜ್ಯಗಳಲ್ಲಿ ಇದನ್ನು ವಿಸ್ತರಿಸಲಾಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದರು. ಭಾರತೀಯ ನ್ಯಾಯ ಸಂಹಿತೆ ಜಾರಿಯ ಮೂಲಕ ದೇಶದ ಅಪರಾಧ ನ್ಯಾಯ ವ್ಯವಸ್ಥೆಯನ್ನು ಕೇಂದ್ರ ಸರ್ಕಾರ ಮತ್ತಷ್ಟು ಸದೃಢ ಗೊಳಿಸಿದೆ. ನೂತನ ಕಾಯ್ದೆಗಳ ಪರಿಣಾಮ ಹಲವು ರಾಜ್ಯಗಳಲ್ಲಿ ಒಂದು ವರ್ಷದಲ್ಲಿ ಅಪರಾಧಿಗಳಿಗೆ ಶಿಕ್ಷೆಯಾಗುವ ಪ್ರಮಾಣ ಶೇಕಡ ೩೦ರಷ್ಟು ಹೆಚ್ಚಳವಾಗಿದೆ ಎಂದು ತಿಳಿಸಿದ್ದಾರೆ.

**<>><><*><><<>**

೧೭ನೇ ಬ್ರಿಕ್ಸ್ ಶೃಂಗಸಭೆಯ ಯಶಸ್ವಿ ಆಯೋಜನೆಗೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಪ್ರಧಾನಿ ನರೇಂದ್ರ ಮೋದಿ ಅವರನ್ನು ಅಭಿನಂದಿಸಿದ್ದು, ಈ ಐತಿಹಾಸಿಕ ಶೃಂಗಸಭೆಯ ಯಶಸ್ಸು ಜಾಗತಿಕ ಮಟ್ಟದಲ್ಲ ಭಾರತದ ಛಾಪನ್ನು ಬಲವಾಗಿ ಮೂಡಿಸಿದೆ ಎಂದು ಬಣ್ಣಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಸಂದೇಶ ಹಂಚಿಕೊಂಡಿರುವ ಅವರು, ಶೃಂಗಸಭೆಯಲ್ಲಿ ಸರ್ವಸಮ್ಮತಿಯಿಂದ ಅಂಗೀಕರಿಸಲ್ಪಟ್ಟ ನವದೆಹಲಿ ಘೋಷಣೆಯು ಕೇವಲ ಒಂದು ಔಪಚಾರಿಕ ದಾಖಲೆಯಾಗಿ ಉಳಿಯದೇ ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಭಾರತದ ಬೆಳೆಯುತ್ತಿರುವ ಜಾಗತಿಕ ಪ್ರಭಾವ ಹಾಗೂ ರಾಜತಾಂತ್ರಿಕ ಶಕ್ತಿಗೆ ಸಾಕ್ಷಿಯಾಗಿದೆ ಎಂದು ಶ್ಲಾಘಿಸಿದ್ದಾರೆ. ದೂರದರ್ಶಿ ನಾಯಕತ್ವದಡಿ ಭಾರತ ಬ್ರಿಕ್ಸ್ ಅಧ್ಯಕ್ಷತೆಯ ಅವಧಿಯಲ್ಲಿ ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಹಾಗೂ ಸುಸ್ಥಿರತೆ ಎಂಬ ಆದ್ಯತೆಗಳ ಆಧಾರದ ಮೇಲೆ ಬ್ರಿಕ್ಸ್ ಸಹಕಾರ ಮತ್ತು ಯೋಜನೆಗಳನ್ನು ನೇರವಾಗಿ ಸಾರ್ವಜನಿಕರೊಂದಿಗೆ ತಲುಪಿಸುವ ಜನಕೇಂದ್ರಿತ ದೃಷ್ಟಿಕೋನಕ್ಕೆ ಭಾರತ ವಿಶೇಷ ಒತ್ತು ನೀಡಿದೆ ಎಂದಿದ್ದಾರೆ. ಜಾಗತಿಕ ದಕ್ಷಿಣದ ರಾಷ್ಟ್ರಗಳ ಧ್ವನಿ ಮತ್ತು ಹಿತಾಸಕ್ತಿಗಳನ್ನು ಜಾಗತಿಕ ವೇದಿಕೆಯ ಕೇಂದ್ರ ಬಿಂದುವನ್ನಾಗಿ ಮಾಡುವ ಮೂಲಕ ಹೆಚ್ಚು ಸಮತೋಲಿತ ಹಾಗೂ ಒಳಗೊಳ್ಳುವ ಜಾಗತಿಕ ವ್ಯವಸ್ಥೆಗೆ ಭಾರತ ಶ್ರಮಿಸಿದೆ. ಹಾಗೂ 'ವಸುಧೈವ ಕುಟುಂಬಕಂ' ಎಂಬ ಧ್ಯೇಯಕ್ಕೆ ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

**<>><><*><><<>**

ಜಾಗತಿಕ ಆರೋಗ್ಯ ಕ್ಷೇತ್ರದಲ್ಲಿ ಸಹಕಾರ, ನಾವೀನ್ಯತೆ, ಸ್ಥಿತಿಸ್ಥಾಪಕತ್ವ ಹಾಗೂ ಸುಸ್ತಿರ ಹಣಕಾಸು ನೆರವನ್ನು ಮತ್ತಷ್ಟು ಬಲಪಡಿಸುವಂತೆ ವಿಶ್ವ ಆರೋಗ್ಯ ಸಂಸ್ಥೆ-ಡಬ್ಲ್ಯೂಎಚ್‌ಒ ದ ಮಹಾ ನಿರ್ದೇಶಕ ಡಾ.ಟೆಡ್ರೋಸ್ ಅಧನೊಮ್ ಗೆಬ್ರೆಯೆಸೆಸ್ ಬ್ರಿಕ್ಸ್ ಒಕ್ಕೂಟದ ನಾಯಕರಿಗೆ ಕರೆ ನೀಡಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ನವದೆಹಲಿಯಲ್ಲಿ ನಡೆದ ಬ್ರಿಕ್ಸ್ ನಾಯಕರ ಶೃಂಗಸಭೆ ನಾಲ್ಕು ಪ್ರಮುಖ ಆಶಯಗಳು ಜಾಗತಿಕ ಆರೋಗ್ಯ ಕ್ಷೇತ್ರಕ್ಕೆ ನೇರವಾಗಿ ಪೂರಕವಾಗಿವೆ ಎಂದು ತಿಳಿಸಿದ್ದಾರೆ. ಆರೋಗ್ಯ ಕ್ಷೇತ್ರದಲ್ಲಿ ಸ್ಥಿತಿಸ್ಥಾಪಕತ್ವವನ್ನು ಸಾಧಿಸಲು ಪ್ರಾಥಮಿಕ ಆರೋಗ್ಯ ರಕ್ಷಣೆ, ರೋಗಗಳ ಕಣ್ಗಾವಲು ವ್ಯವಸ್ಥೆ, ಮುನ್ನೆಚ್ಚರಿಕಾ ವ್ಯವಸ್ಥೆ ಹಾಗೂ ಸ್ಥಳೀಯ ಔಷಧೀಯ ಉತ್ಪಾದನೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಪ್ರತಿಪಾದಿಸಿದ್ದಾರೆ. ನಾವೀನ್ಯತೆಗೆ ಸಂಬಂಧಿಸಿದಂತೆ ವಿಜ್ಞಾನ, ಡಿಜಿಟಲ್ ಆರೋಗ್ಯ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆಯ

ಪ್ರಯೋಜನಗಳು, ಸಮಾಜದ ಪ್ರತಿಯೊಬ್ಬರಿಗೂ ತಲುಪುವಂತೆ ಸಾರ್ವಜನಿಕ ಆರೋಗ್ಯಕ್ಕಾಗಿ ಬಳಸಿಕೊಳ್ಳಬೇಕು ಎಂದಿದ್ದಾರೆ.

<>><><*><><<>

ಬುದ್ಧಿ, ಸಮೃದ್ಧಿ ಮತ್ತು ಅದೃಷ್ಟದ ಸಂಕೇತವಾಗಿರುವ ವಿಘ್ನನಿವಾರಕ ಗಣಪತಿಯ ಜನ್ಮದಿನದ ಸಂಕೇತವಾದ ಗಣೇಶ ಚತುರ್ಥಿ ಹಬ್ಬವನ್ನು ಇಂದು ದೇಶಾದ್ಯಂತ ಅತ್ಯಂತ ಶ್ರದ್ಧಾ-ಭಕ್ತಿ ಹಾಗೂ ಸಡಗರದಿಂದ ಆಚರಿಸಲಾಗುತ್ತಿದೆ. 'ವಿನಾಯಕ ಚತುರ್ಥಿ' ಅಥವಾ 'ಗಣೇಶೋತ್ಸವ' ಎಂದೂ ಕರೆಯಲ್ಪಡುವ ಈ ಶುಭ ದಿನ, ಹತ್ತು ದಿನಗಳ ಸುದೀರ್ಘ ಸಾಂಸ್ಕೃತಿಕ ಹಾಗೂ ಧಾರ್ಮಿಕ ಉತ್ಸವದ ಆರಂಭವನ್ನು ಸೂಚಿಸುತ್ತದೆ. ಹಬ್ಬದ ಪ್ರಯುಕ್ತ ಸಾರ್ವಜನಿಕರು ತಮ್ಮ ಮನೆಗಳಲ್ಲಿ ಮತ್ತು ನೂರಾರು ಮಂಟಪಗಳಲ್ಲಿ ಸುಂದರ ಮಣ್ಣಿನ ಗಣಪತಿ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ವಿಶೇಷ ಪೂಜೆ-ಪುನಸ್ಕಾರಗಳನ್ನು ನೆರವೇರಿಸುತ್ತಿದ್ದಾರೆ. ಹತ್ತು ದಿನಗಳ ಅದ್ದೂರಿ ಆಚರಣೆಯ ಬಳಿಕ ಗಣೇಶ ವಿಸರ್ಜನೆಯೊಂದಿಗೆ ಈ ಉತ್ಸವವು ಮುಕ್ತಾಯಗೊಳ್ಳಲಿದೆ. ಗಣೇಶ ಚತುರ್ಥಿ ಹಬ್ಬದ ಸಂದರ್ಭದಲ್ಲಿ ದೇಶದ ಸಮಸ್ತ ಜನತೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಲೋಕಸಭಾಧ್ಯಕ್ಷ ಓಂ ಬಿರ್ಲಾ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಅನೇಕ ಗಣ್ಯರು ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಸಂಸ್ಕೃತ ಸುಭಾಷಿತವೊಂದನ್ನು ಹಂಚಿಕೊಂಡಿರುವ ಪ್ರಧಾನಿ, ಈ ಹಬ್ಬ ಎಲ್ಲರ ಜೀವನದಲ್ಲಿ ಹೊಸ ಚೈತನ್ಯ ಮತ್ತು ನವೀನ ಉತ್ಸಾಹವನ್ನು ತುಂಬುತ್ತದೆ. ವಿಘ್ನೇಶ್ವರನ ಕೃಪಾಕಟಾಕ್ಷದ ಮೂಲಕ ಎಲ್ಲರ ಯೋಜನೆಗಳು ಸಫಲವಾಗಿ, ರಾಷ್ಟ್ರ ನಿರಂತರ ಪ್ರಗತಿಯ ಹಾದಿಯಲ್ಲಿ ಮುಂದುವರೆಯಲಿ ಎಂದು ಆಶಿಸಿದ್ದಾರೆ.

<>><><*><><<>

ದೇಶದಲ್ಲಿ ೨೦೨೦ರೀಚೆಗೆ ಇದುವರೆಗೆ ೯ ರಾಜ್ಯಗಳಲ್ಲಿ ಒಟ್ಟು ೧೪೭ ಕಲ್ಲಿದ್ದಲು ಬ್ಲಾಕ್‌ಗಳನ್ನು ಯಶಸ್ವಿಯಾಗಿ ಹರಾಜು ಮಾಡಲಾಗಿದೆ ಎಂದು ಕೇಂದ್ರ ಕಲ್ಲಿದ್ದಲು ಸಚಿವಾಲಯ ತಿಳಿಸಿದೆ. ಈ ಪಾರದರ್ಶಕ ಹರಾಜು ಪ್ರಕ್ರಿಯೆಯಿಂದ ವಾರ್ಷಿಕ ಸುಮಾರು ೪೭ ಸಾವಿರದ ೫೦೦ ಕೋಟಿ ರೂಪಾಯಿ ಆದಾಯ ಹರಿದು ಬರಲಿದ್ದು, ಸುಮಾರು ೪.೯ ಲಕ್ಷ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ ಎಂದು ಅಂದಾಜಿಸಲಾಗಿದೆ. ಕಳೆದ ಹಣಕಾಸು ವರ್ಷದಲ್ಲಿ ಹಂಚಿಕೆ ಮಾಡಲಾದ ವಾಣಿಜ್ಯ ಕಲ್ಲಿದ್ದಲು ಗಣಿಗಳಿಂದ ಸುಮಾರು ೩ ಸಾವಿರದ ೯೦ ಕೋಟಿ ರೂಪಾಯಿ ಒಟ್ಟು ಆದಾಯ ಸಂಗ್ರಹವಾಗಿದ ಎಂದು ಸಚಿವಾಲಯಕ್ಕೆ ಮಾಹಿತಿ ನೀಡಿದೆ.

<>><><*><><<>

ದಾಖಲೆಯ ೮ನೇ ಬಾರಿ ಮಹಿಳಾ ಟಿ-೨೦ ಏಷ್ಯಾಕಪ್ ಪ್ರಶಸ್ತಿ ಗೆದ್ದಿರುವ ಭಾರತೀಯ ವನಿತೆಯರ ತಂಡಕ್ಕೆ ಎಲ್ಲೆಡೆಯಿಂದ ಶುಭಾಶಯಗಳ ಸಂದೇಶಗಳು ಹರಿದು ಬರುತ್ತಿವೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಸೇರಿದಂತೆ ಅನೇಕ ಗಣ್ಯರು ವನಿತಾ ತಂಡದ ಸಾಧನೆ, ಶ್ರಮ ಹಾಗೂ ಬದ್ಧತೆಯನ್ನು ಶ್ಲಾಘಿಸಿ ಮುಂದಿನ ಪಯಣಕ್ಕೆ ಶುಭ ಹಾರೈಸಿದ್ದಾರೆ. ತಮ್ಮ ಸಂದೇಶದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಟೂರ್ನಿಯುದ್ದಕ್ಕೂ ಭಾರತ ತಂಡ ಒಂದು ತಂಡವಾಗಿ ಅಮೋಘ ಪ್ರದರ್ಶನ ನೀಡಿದೆ. ಭಾರತದ ಯುವಜನತೆಗೆ ಈ ಕ್ರೀಡಾಪಟುಗಳು ಪ್ರೇರಣೆಯಾಗಿದ್ದು, ಮುಂದಿನ ದಿನಗಳಲ್ಲಿ ಈ ತಂಡ ಮತ್ತಷ್ಟು ಯಶಸ್ಸು ಕಾಣಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ತಂಡವನ್ನು ಅಭಿನಂದಿಸಿದ್ದು, ಸರಣಿಯುದ್ದಕ್ಕೂ

ಅಜೇಯವಾಗಿ ಉಳಿದು ಅತ್ಯುತ್ತಮ ಸಹಕಾರ ಮತ್ತು ದೃಢಸಂಕಲ್ಪ ದೇಶಕ್ಕೆ ಅಪಾರ ಹೆಮ್ಮೆ ತಂದಿದೆ ಎಂದಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಭಾರತೀಯ ಆಟಗಾರ್ತಿಯರ ಆತ್ಮವಿಶ್ವಾಸ, ಸ್ಥಿರಪ್ರದರ್ಶನ ಹಾಗೂ ಕ್ರೀಡಾ ಸ್ಫೂರ್ತಿಯನ್ನು ಶ್ಲಾಘಿಸಿದ್ದು, ಈ ಗೆಲುವು ದೇಶದ ಯುವಜನತೆಗೆ ಕ್ರೀಡೆಯಲ್ಲಿ ಸಕ್ರಿಯವಾಗಿ ಮುನ್ನಡೆಯಲು ಸ್ಫೂರ್ತಿ ನೀಡಲಿದೆ ಎಂದಿದ್ದಾರೆ.

<><><*><><<>

ನ್ಯೂಯಾರ್ಕ್‌ನಲ್ಲಿ ನಡೆದ ಯುಎಸ್ ಓಪನ್ ಗ್ರ್ಯಾಂಡ್ ಸ್ಲಾಮ್ ಟೆನಿಸ್ ಟೂರ್ನಿಯಲ್ಲಿ ಪುರುಷರ ಸಿಂಗಲ್ಸ್ ವಿಭಾಗದ ಪ್ರಶಸ್ತಿಯನ್ನು ಜರ್ಮನಿಯ ಅಲೆಗ್ಸಾಂಡರ್ ಜ್ವೆರೇವ್ ತಮ್ಮದಾಗಿಸಿಕೊಂಡಿದ್ದಾರೆ. ಇಂದು ನಡೆದ ಫೈನಲ್ ಪಂದ್ಯದಲ್ಲಿ ಅವರು, ಅಮೆರಿಕದ ಬೆನ್‌ಶೆಲ್ಟನ್ ವಿರುದ್ಧ ೬-೩, ೭-೬, ೫-೭, ೬-೨ ಸೆಟ್‌ಗಳ ಅಂತರದಲ್ಲಿ ಗೆಲುವು ದಾಖಲಿಸಿದ್ದಾರೆ. ಇನ್ನು ಮಹಿಳಾ ಸಿಂಗಲ್ಸ್ ಪ್ರಶಸ್ತಿ ವಿಜೇತ ಎಲೆನಾ ರಿಬಾಕಿನಾ, ಮಹಿಳಾ ಟೆನಿಸ್ ಸಂಸ್ಥೆ-ಡಬ್ಲ್ಯುಟಿಎ ಯ ಶ್ರೇಯಾಂಕದಲ್ಲಿ ಸಾಪ್ತಾಯಿಕ ನವೀಕರಣದ ಬಳಿಕ, ಅಗ್ರಸ್ಥಾನವನ್ನು ತಮ್ಮದಾಗಿಸಿಕೊಂಡಿದ್ದಾರೆ. ಆ ಮೂಲಕ ೯೯ ವಾರಗಳ ಕಾಲ ಅಗ್ರಸ್ಥಾನದಲ್ಲಿದ್ದ ಅರಿನಾ ಸಬಲೆಂಕಾ ಅವರ ಸಾಧನೆಯನ್ನು ಹಿಮ್ಮೆಟ್ಟಿಸಿದ್ದಾರೆ.

<><><*><><<>

ನವದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಮೊದಲ ಟಿ-೨೦ ಅಂತಾರಾಷ್ಟ್ರೀಯ ಪಂದ್ಯದಲ್ಲಿ ಅಫ್ಘಾನಿಸ್ತಾನ ವಿರುದ್ಧ ೭ ವಿಕೆಟ್‌ಗಳ ಜಯ ಸಾಧಿಸಿದ ಭಾರತೀಯ ಪುರುಷರ ಕ್ರಿಕೆಟ್ ತಂಡ, ಮೂರು ಪಂದ್ಯಗಳ ಸರಣಿಯಲ್ಲಿ ೧-೦ ಅಂತರದ ಮುನ್ನಡೆ ಪಡೆದುಕೊಂಡಿದೆ. ಟಾಸ್ ಗೆದ್ದು ಮೊದಲು ಬೌಲಿಂಗ್ ಆಯ್ದುಕೊಂಡ ಭಾರತದ ಉತ್ತಮ ಬೌಲಿಂಗ್ ಪ್ರದರ್ಶನದ ಬೆನ್ನಲ್ಲೇ ಅಫ್ಘಾನಿಸ್ತಾನ ೪೩ ರನ್‌ಗಳಿಗೆ ೫ ವಿಕೆಟ್ ಕಳೆದುಕೊಂಡಿತು. ಈ ವೇಳೆ ಅಜ್ಮತುಲ್ಲಾ ಉಮರ್ಝೈಯ್ ಹಾಗೂ ಮೊಹಮ್ಮದ್ ನಬಿ ಜೋಡಿ ೮೩ ರನ್‌ಗಳ ಆಕರ್ಷಕ ಜೊತೆಯಾಟವಾಡಿ ತಂಡ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್‌ಗೆ ೧೫೬ ರನ್‌ಗಳ ಸವಾಲಿನ ಮೊತ್ತ ಕಲೆಹಾಕಲು ನೆರವಾಯಿತು. ಭಾರತದ ಪರ ಅರ್ಷ್‌ದೀಪ್ ಸಿಂಗ್ ೧೯ ರನ್‌ಗಳಿಗೆ ೩ ವಿಕೆಟ್ ಗಳಿಸಿದರು. ಗೆಲುವಿನ ಗುರಿ ಬೆನ್ನಟ್ಟಿದ ಭಾರತ ತಂಡವು ಇನ್ನೂ ೩೮ ಎಸೆತಗಳು ಬಾಕಿ ಇರುವಂತೆಯೇ ೧೩.೪ ಓವರ್‌ಗಳಲ್ಲಿ ೩ ವಿಕೆಟ್‌ಗಳ ನಷ್ಟಕ್ಕೆ ೧೫೭ ರನ್‌ಗಳಿಸಿ ಸುಲಭವಾಗಿ ಗುರಿ ತಲುಪಿತು. ಆರಂಭಿಕ ಆಟಗಾರ ಅಭಿಷೇಕ್ ಶರ್ಮಾ ಕೇವಲ ೩೨ ಎಸೆತಗಳಲ್ಲಿ ೮೨ ರನ್ ಗಳಿಸಿದ್ದಲ್ಲದೆ, ಇಶಾನ್ ಕಿಶನ್ ಅವರೊಂದಿಗೆ ಮೊದಲ ವಿಕೆಟ್‌ಗೆ ೧೨೧ ರನ್‌ಗಳ ಜೊತೆಯಾಟ ಒದಗಿಸಿ 'ಪಂದ್ಯಶ್ರೇಷ್ಠ' ಪ್ರಶಸ್ತಿಗೆ ಭಾಜನರಾದರು. ಸರಣಿಯ ಬಾಕಿ ಎರಡು ಪಂದ್ಯಗಳು ಇದೇ ಕ್ರೀಡಾಂಗಣದಲ್ಲಿ ನಾಳೆ ಮತ್ತು ಇದೇ ಗುರುವಾರ ಜರುಗಲಿವೆ.

<><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>